**All India Radio: Bangalore**
**Regional Bulletin In Kannada**
**09.01.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**09.01.2026 / 2.30 p.m.**

**<><><><>**

ಮುಖ್ಯಾಂಶಗಳು

1. ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಭೇಟಿ; ವಾಹನ ದಟ್ಟಣೆ ಸಮಸ್ಯೆ ನಿವಾರಿಸಲು ಸೂಚನೆ
2. ಮಾನವ-ಕಾಡುಪ್ರಾಣಿ ಸಂಘರ್ಷ ತಡೆಗೆ ಸೂಕ್ತ ಕ್ರಮ ; ಅರಣ್ಯ ಸಚಿವ ಈಶ್ವರ್ ಖಂಡ್ರೆ
3. ಹುಬ್ಬಳ್ಳಿಯ ಮಹಿಳೆ ವಿವಸ್ತ್ರ ಪ್ರಕರಣ ; ಸಿಐಡಿ ತನಿಖೆಗೆ ನೀಡಲು ಚಿಂತನೆ - ಗೃಹ ಸಚಿವ ಡಾ.ಜಿ.ಪರಮೇಶ್ವರ್
4. ಮನ್ರೇಗಾ ಹಾಗೂ ವಿಕಸಿತ ಭಾರತ ಜಿ ರಾಮ್ ಜಿ ಯೋಜನೆಯ ಬಹಿರಂಗ ಚರ್ಚೆಗೆ ಸಿದ್ಧ - ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

<><><><>

ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಜಾರಿಗೆ ತರಲಾದ ಹೊಸ ಪಾರ್ಕಿಂಗ್ ಮತ್ತು ನೋಂದಣಿ ವ್ಯವಸ್ಥೆಯಿಂದ ಪ್ರಯಾಣಿಕರಿಗೆ ಎದುರಾಗಿರುವ ಸಮಸ್ಯೆಗಳನ್ನು ಬಗೆಹರಿಸಲು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಇಂದು ವಿಮಾನ ನಿಲ್ದಾಣಕ್ಕೆ ಭೇಟಿ ನೀಡಿ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದರು. ಟರ್ಮಿನಲ್-೧ರ ಆಗಮನ ದ್ವಾರದ ಬಳಿ ವಾಹನಗಳ ಅಸ್ತವ್ಯಸ್ತ ಸಂಚಾರ ಹಾಗೂ ದಟ್ಟಣೆಯಿಂದ ಪ್ರಯಾಣಿಕರಿಂದ ದೂರುಗಳು ಹೆಚ್ಚಾದ ಹಿನ್ನೆಲೆಯಲ್ಲಿ ನಡೆದ ಸಭೆಯಲ್ಲಿ, ಖಾಸಗಿ ಮತ್ತು ವಾಣಿಜ್ಯ ವಾಹನಗಳ ಪ್ರವೇಶವನ್ನು ವ್ಯವಸ್ಥಿತವಾಗಿ ನಿಯಂತ್ರಿಸಬೇಕು. ಆಗಮನ ದ್ವಾರದ ಸಮೀಪದ ನೂರು ಮೀಟರ್ ವ್ಯಾಪ್ತಿಯನ್ನು 'ಹಾರ್ನ್ ಮುಕ್ತ ವಲಯ' ಎಂದು ಘೋಷಿಸಿ, ನಿಯಮ ಉಲ್ಲಂಘಿಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ಮುಖ್ಯ ಕಾರ್ಯದರ್ಶಿ ಪೊಲೀಸ್ ಇಲಾಖೆಗೆ ಸೂಚಿಸಲಾಯಿತು. ಪಿ-೪ ಪಾರ್ಕಿಂಗ್‌ನಲ್ಲಿ ವಾಹನ ನಿಲುಗಡೆ ಮಾಡುವ ಖಾಸಗಿ ಮಾಲೀಕರಿಗೆ 'ವಾಲೆಟ್' ಸೌಲಭ್ಯ ಒದಗಿಸಬೇಕು. ಹಿರಿಯ ನಾಗರಿಕರಿಗಾಗಿ ಹೈಡ್ರಾಲಿಕ್ ಸೌಲಭ್ಯವುಳ್ಳ ವಿಶೇಷ ವಾಹನಗಳು

ಹಾಗೂ ಟರ್ಮಿನಲ್‌ಗಳ ನಡುವೆ ಉಚಿತ ಶಟಲ್ ಬಸ್ ಸೇವೆಯನ್ನು ಮತ್ತಷ್ಟು ಬಲಪಡಿಸಲು ಸೂಚಿಸಲಾಯಿತು. ಪ್ರಯಾಣಿಕರ ಸುರಕ್ಷತೆಯ ದೃಷ್ಟಿಯಿಂದ ಕಡ್ಡಾಯ ಪೊಲೀಸ್ ಪರಿಶೀಲನೆ, ಎ.ಐ.ಎಸ್-೧೪೦ ತಾಂತ್ರಿಕತೆ ಹಾಗೂ ಪ್ಯಾನಿಕ್ ಬಟನ್ ಹೊಂದಿರುವ ಟ್ಯಾಕ್ಸಿಗಳಿಗೆ ಮಾತ್ರ ಕೆ.ಎಸ್.ಟಿ.ಡಿ.ಸಿ ಮೂಲಕ ನೋಂದಣಿ ಮಾಡಿಕೊಂಡು ಆದ್ಯತೆ ನೀಡಲು ನಿರ್ಧರಿಸಲಾಗಿದೆ. ಪ್ರಯಾಣಿಕರಿಗೆ ಮಾರ್ಗದರ್ಶನ ನೀಡಲು ಸಂಚಾರ ಡೆಸ್ಕ್ ಸ್ಥಾಪಿಸಲಾಗಿದ್ದು, ಹೆಚ್ಚುವರಿ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ನಮ್ಮ ಯಾತ್ರಿ ಮತ್ತು ರ್‍ಯಾಪಿಡೋ ಸೇವೆಗಳನ್ನು ಪಿ-೧ ಮತ್ತು ಪಿ-೨ ಬದಲಿಗೆ ಪಿ-೪ ಪಾರ್ಕಿಂಗ್‌ಗೆ ಸ್ಥಳಾಂತರಿಸಲಾಗಿದೆ. ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ವಿಮಾನ ನಿಲ್ದಾಣದ ಪ್ರಾಧಿಕಾರ ಮತ್ತು ಪೊಲೀಸ್ ಇಲಾಖೆ ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕೆಂದು ಮುಖ್ಯ ಕಾರ್ಯದರ್ಶಿಗಳು ಈ ಸಂದರ್ಭದಲ್ಲಿ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

<><><><>

ರಾಜ್ಯದಲ್ಲಿ ಮಾನವ ಮತ್ತು ಕಾಡು ಪ್ರಾಣಿ ಸಂಘರ್ಷ ತಡೆಯಲು ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ ಎಂದು ಅರಣ್ಯ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಅರಣ್ಯ ಇಲಾಖೆಯ ಉಪ ಸಂರಕ್ಷಣಾಧಿಕಾರಿಯವರ ನೂತನ ಕಚೇರಿ ಉದ್ಘಾಟನೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾನವ ಪ್ರಾಣಿ ಸಂಘರ್ಷದಲ್ಲಿ ಹುಲಿ ಮತ್ತು ಆನೆ ಸಮಸ್ಯೆ ಅತಿಯಾಗಿದೆ. ಆನೆ ಸಮಸ್ಯೆ ಇತ್ಯರ್ಥ ಮಾಡಲು ಆನೆ ಕಾರ್ಯಪಡೆ ರಚನೆ ಮಾಡಿ, ಮಾನವ ಸಂಘರ್ಷ ತಡೆಯಲು ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದರು. ದಕ್ಷಿಣ ಕನ್ನಡ ಜಿಲ್ಲೆಯ ಸುಳ್ಯ ಭಾಗದಲ್ಲಿ ಆನೆಗಳು ಜನವಸತಿ ಪ್ರದೇಶಕ್ಕೆ ಬರುತ್ತಿರುವ ಬಗ್ಗೆ ಮಾಹಿತಿ ಇದೆ. ಆನೆಗಳನ್ನು ಹಿಮ್ಮೆಟ್ಟಿಸುವ ಕ್ರಮ ಆಗುತ್ತಿದೆ. ೧೯೨೬ ಸಹಾಯವಾಣಿ ರಚಿಸಲಾಗಿದ್ದು, ಈ ಸಂಖ್ಯೆಗೆ ಕರೆ ಮಾಡಿದರೆ ತಕ್ಷಣ ಅರಣ್ಯ ಅಧಿಕಾರಿಗಳು ಸ್ಥಳಕ್ಕೆ ಧಾವಿಸಿ ಸ್ಪಂದಿಸಲಿದ್ದಾರೆ ಎಂದು ಹೇಳಿದರು.

**ಧ್ವನಿ : ಈಶ್ವರ್ ಬಿ. ಖಂಡ್ರೆ**

ಕುದುರೆಮುಖ ಸುತ್ತಮುತ್ತಲಿನ ಅರಣ್ಯ ವಾಸಿಗಳನ್ನು ಸ್ಥಳಾಂತರ ಮಾಡಲು ಯೋಜನೆ ರೂಪಿಸಲಾಗಿದೆ. ಈ ಯೋಜನೆಯ ಬಗ್ಗೆ ಮುಖ್ಯಮಂತ್ರಿಗಳ ಗಮನಕ್ಕೆ ತಂದು ಅದನ್ನು ಜಾರಿಗೆ ತರಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಸಚಿವರು ತಿಳಿಸಿದರು.

<><><><>

ಹುಬ್ಬಳ್ಳಿಯಲ್ಲಿ ನಡೆದ ಮಹಿಳೆಯೊಬ್ಬರ ವಿವಸ್ತ್ರ ಪ್ರಕರಣದ ತನಿಖೆಯನ್ನು ಸಿಐಡಿಗೆ ನೀಡುವ ಬಗ್ಗೆ ಚರ್ಚೆ ನಡೆಸಲಾಗುತ್ತಿದ್ದು, ಮುಖ್ಯಮಂತ್ರಿಯವರು ಅನುಮತಿ ಪಡೆದು ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನ ಗೃಹ ಕಚೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಘಟನೆಯ ಸತ್ಯಾಸತ್ಯತೆಯ ಬಗ್ಗೆ ತನಿಖೆ ನಡೆಸಿ ಸಿಐಡಿ ಸರ್ಕಾರಕ್ಕೆ ವರದಿ ನೀಡಿದ ನಂತರ ತಪ್ಪಿತಸ್ಥರು ಹಾಗೂ ಘಟನೆಯಲ್ಲಿ ಯಾರ ನಿರ್ಲಕ್ಷ್ಯವಿದೆ ಎಂಬುದನ್ನು ಪರಿಗಣಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದರು. ಮತ್ತೊಂದೆಡೆ ಈ ಪ್ರಕರಣದ ಕುರಿತು ಮಾತನಾಡುತ್ತಾ ಸರ್ಕಾರದ ಕಾರ್ಯವೈಖರಿಯ ಬಗ್ಗೆ ಪ್ರಶ್ನಿಸಿರುವ ಸಂಸದ ಬಸವರಾಜ ಬೊಮ್ಮಾಯಿ, ಸರ್ಕಾರ ಹುಬ್ಬಳ್ಳಿ-ಧಾರವಾಡ ಪೊಲೀಸ್ ಆಯುಕ್ತರನ್ನು ವರ್ಗಾವಣೆ ಮಾಡಬೇಕು ಎಂದು ಆಗ್ರಹಿಸಿದ್ದಾರೆ. ಬೆಂಗಳೂರು ಬಿಜೆಪಿ ಕಚೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದಲಿತ ಮಹಿಳೆಯೊಬ್ಬರ ವಿವಸ್ತ್ರಗೊಳಿಸಿರುವ ಪ್ರಕರಣ ಒಂದು ಅಮಾನುಷವಾದ ಘಟನೆಯಾಗಿದೆ. ಅದು ಪೊಲೀಸ್ ಇಲಾಖೆಯಿಂದ ನಡೆದಿದೆ ಎಂದು ಕೇಳಿಬರುತ್ತಿರುವ ಆರೋಪಗಳು ರಾಜ್ಯದಲ್ಲಿ ಗೃಹಇಲಾಖೆಯು ಹಿಡಿತ ಕಳೆದುಕೊಂಡು ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಎಂಬುದರ ಸಂಕೇತವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

<><><><>

ಮನ್ರೇಗಾ ಯೋಜನೆ ಮತ್ತು ಹೊಸದಾಗಿ ಜಾರಿಗೆ ಬಂದಿರುವ ವಿಕಿಸಿತ ಭಾರತ್ ಜಿ ರಾಮ್ ಜಿ ಯೋಜನೆ ಬಗ್ಗೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರು, ಬಹಿರಂಗ ಚರ್ಚೆ ನಡೆಸಿ, ಜನರಿಗೆ ಈ ವಿಚಾರವಾಗಿ ಜಾಗೃತಿ ಮೂಡಿಸಬಹುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡುತ್ತಾ ಯುಪಿಎ ಸರ್ಕಾರದ ಅವಧಿಯ ಮನ್ರೇಗಾ ಯೋಜನೆಯಲ್ಲಿ ಹಣಕಾಸು ಅವ್ಯವಹಾರ ನಡೆದಿದೆ ಎಂಬ ಕೇಂದ್ರ ಸಚಿವರ ಹೇಳಿಕೆಯ ಕುರಿತು ಪ್ರತಿಕ್ರಿಯಿಸಿದ ಅವರು, ಬಿಜೆಪಿ ನಾಯಕರು ಈ ವಿಚಾರವಾಗಿ ಚರ್ಚೆಗೆ

ಮುಂದಾದಲ್ಲಿ ಚರ್ಚೆ ನಡೆಸಲು ಸಿದ್ಧರಿರುವುದಾಗಿ ತಿಳಿಸಿದರು. ಈ ಯೋಜನೆಯಲ್ಲಿ ಅವ್ಯವಹಾರ ನಡೆದಿದ್ದಲ್ಲಿ ಸಿಬಿಐ ತನಿಖೆಗೆ ನೀಡಲಿ. ಮನ್ರೇಗಾ ಉಳಿಸಲು ಎರಡು ದಿನಗಳ ವಿಶೇಷ ಅಧಿವೇಶನ ಕರೆದು ಸಂಪೂರ್ಣ ಚರ್ಚೆ ನಡೆಸಲಾಗುವುದು ಎಂದು ಉಪಮುಖ್ಯಮಂತ್ರಿ ಮಾಹಿತಿ ನೀಡಿದರು.

<><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ನೇಕಾರರಿಗೆ ಸೀರೆಗಳನ್ನು ಮಾರಾಟ ಮಾಡಲು ಅನುಕೂಲ ಕಲ್ಪಿಸುವ ದಿಸೆಯಲ್ಲಿ ನೇಕಾರ ಮಾರಾಟ ಮಳಿಗೆ ಹಾಗೂ ನೇಕಾರ ಭವನ ಕಟ್ಟಡ ನಿರ್ಮಾಣಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ  ಗುದ್ದಲಿ ಪೂಜೆ ನೆರವೇರಿಸಿದರು. ಈ ವೇಳೆ ಮಾತನಾಡಿದ ಅವರು, ಕೈ ಮಗ್ಗ ಮತ್ತು ಜವಳಿ ಇಲಾಖೆಯ ವತಿಯಿಂದ ಶಾಸಕರ ಅನುದಾನ ಮತ್ತು ಬಯಲು ಸೀಮೆ ಅಭಿವೃದ್ಧಿ ಪ್ರಾಧಿಕಾರದ ಅನುದಾನದಿಂದ  ೧ ಕೋಟಿ ೨೫ ಲಕ್ಷ ರೂಪಾಯಿ ವೆಚ್ಚದಲ್ಲಿ ಒಟ್ಟು ೩೦ ಮಳಿಗೆಗಳು ನಿರ್ಮಾಣವಾಗಲಿದ್ದು, ನೇಕಾರರ ಸೀರೆಗಳಿಗೆ ಅಂತಾರಾಜ್ಯ ಮಾರುಕಟ್ಟೆ ಲಭಿಸಲಿದೆ ಹಾಗೂ ೧೦ ಎಚ್.ಪಿ ವರೆಗೂ ಉಚಿತ ವಿದ್ಯುತ್ ನೀಡುತ್ತಿದ್ದು, ನೇಕಾರರ ಹಿತ ಕಾಯಲು ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದ್ದಾರೆ.

<><><>

ಅಪಾಯದಲ್ಲಿರುವ ಅಥವಾ ಸಂಕಷ್ಟದಲ್ಲಿರುವ ದುರ್ಬಲ ಮಹಿಳೆಯರು ಮತ್ತು ಮಕ್ಕಳಿಗೆ ತಕ್ಷಣ ರಕ್ಷಣೆ ನೀಡಲು ಅಕ್ಕಪಡೆ ದಾವಣಗೆರೆ ಜಿಲ್ಲೆಯಾದ್ಯಂತ ಕಾರ್ಯ ನಿರ್ವಹಿಸಲಿದೆ ಎಂದು ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ ತಿಳಿಸಿದ್ದಾರೆ. ಜಿಲ್ಲಾ ಪೊಲೀಸ್ ಕಚೇರಿ ಆವರಣದಲ್ಲಿ ಮಾತನಾಡಿದ ಅವರು,  ಸಹಾನುಭೂತಿ ಮತ್ತು ಸಮುದಾಯ ಸೇವೆಯಲ್ಲಿ ಚಾಲಿತವಾಗಿರುವ ಅಕ್ಕಪಡೆ ಸಮಾಜದಲ್ಲಿ ಸ್ಪಂದಿಸುವ ಸುರಕ್ಷಣಾ ಘಟಕವಾಗಿ ಮತ್ತು ಶೈಕ್ಷಣಿಕ ಶಕ್ತಿಯಾಗಿ ಕಾರ್ಯ ನಿರ್ವಹಿಸುತ್ತದೆ ಎಂದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಮಾತನಾಡಿ, ಅಕ್ಕಪಡೆಯ ಸಹಾಯವಾಣಿಗಳಾದ ೧೦೯೮, ೧೮೧, ೧೧೨, ೧೯೩೦  ಸಂಖ್ಯೆಗಳಿಗೆ ಕರೆ ಮಾಡಿದಲ್ಲಿ ಅಕ್ಕ ಪಡೆ ಕಾರ್ಯಪ್ರವೃತ್ತವಾಗಿ ಸ್ಪಂದಿಸಲಿದೆ ಎಂದರು.

<><><>

ಭಾರತ ಸರ್ಕಾರದ ವಾರ್ತಾ ಶಾಖೆ, ಬೆಂಗಳೂರು ವತಿಯಿಂದ ಇಂದು ಬಳ್ಳಾರಿಯಲ್ಲಿ ಆಯೋಜಿಸಿದ್ದ ವಾರ್ತಾಲಾಪ ಕಾರ್ಯಕ್ರಮವನ್ನು ಬಳ್ಳಾರಿಯ ಮಹಾನಗರ ಪಾಲಿಕೆಯ

ಮಹಾಪೌರ ಗಾದೆಪ್ಪ ಉದ್ಘಾಟಿಸಿದರು. ಭಾರತ ಸರ್ಕಾರದ ವಾರ್ತಾ ಶಾಖೆಯ ಹೆಚ್ಚುವರಿ ಮಹಾನಿರ್ದೇಶಕ ಎಸ್.ಜಿ.ರವೀಂದ್ರ, ಡಾ. ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಗುರುರಾಜ್, ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಎಂ.ವೀರಭದ್ರೇಗೌಡ ಉಪಸ್ಥಿತರಿದ್ದರು.

<><><><>

ನ್ಯಾಷನಲ್ ಹೆರಾಲ್ಡ್ ಜಾಹೀರಾತು ಬಗ್ಗೆ ಮಾತನಾಡುವ ಬಿಜೆಪಿ ನಾಯಕ ಪ್ರಹ್ಲಾದ್ ಜೋಶಿಯವರು ಇಲೆಕ್ಟರಾಲ್ ಬಾಂಡ್, ಪಿಎಂ ಕೇರ್ಸ್ ದುರ್ಬಳಕೆ ಬಗ್ಗೆಯೂ ಮಾತನಾಡಲಿ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸವಾಲು ಹಾಕಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>